**1 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**

**ಜೆ.ಎಂ.ಎಫ್.ಸಿ. ನ್ಯಾಯಾಲಯ, ಹುಬ್ಬಳ್ಳಿ**

**LAC** 5/2024 **PW**-1

**ದಿಃ02.07.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರ ಪರ ವಕೀಲರಾದ ಶ್ರೀ ಯು.ವಿ.ಈಟಗಿರವರಂದ.**

ನಾನು ಈ ಅರ್ಜಿಯಲ್ಲಿ ಅರ್ಜಿದಾರನಾಗಿದ್ದು, ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಈ ದಿನ ನ್ಯಾಯಾಲಯದ ಮುಂದೆ ಸಲ್ಲಿಸುತ್ತಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ. ಅದರಲ್ಲಿರುವ ಸಹಿ ನನ್ನದು.

ನಾನು ನನ್ನ ಅರ್ಜಿಗೆ ಸಂಬಂಧಿಸಿದಂತೆ ನೋಟರಿಯವರ ಮುಂದೆ ದೃಢೀಕರಿಸಲಾದ ಜಿಪಿಎಯನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಶಾನೆ ಪಿ 1 ಎಂದು, ದಿಃ24-09-2024 ರಂದು ನ್ಯಾಯಾಲಯಕ್ಕೆ ನೀಡಲಾದ Reference ಅರ್ಜಿಯನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಶಾನೆ ಪಿ 2 ಎಂದು, ದಿಃ27-08-2024 ರಂದು ವಿಶೇಷ ಭೂಸ್ವಾಧೀನ ಅಧಿಕಾರಿಗಳ ಮುಂದೆ ನೀಡಲಾದ ಸೆಕ್ಷನ 5 ಲಿಮೀಟೇಷನ ಅಪ್ಲಿಕೇಷನನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಶಾನೆ ಪಿ 3 ಎಂದು, ದಿಃ10-03-1959 ರ ಖರೀದಿ ಪತ್ರದ ದೃಢೀಕೃತ ನಕಲನ್ನು ನಿಶಾನೆ ಪಿ 4 ಎಂದು ಗುರ್ತಿಸಲಾಯಿತು.

(ಈ ಹಂತದಲ್ಲಿ ಎದುರುದಾರ ಪರ ವಕೀಲರನ್ನು ಕೂಗಿ ಕೆರೆಯಿಸಲಾಯಿತು. ಗೈರು ಹಾಜರಿರುವ ಕಾರಣ ಪಾಟೀ ಸವಾಲನ್ನು ಮುಂದುಡಲಾಯಿತು.)

(ನನ್ನ ಉಕ್ತಲೇಖದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೆ ಸರಿ ಇದೆ.

1 ನೇ ಅಧಿಕ ಹಿ.ದಿ.ನ್ಯಾ.ಹುಬ್ಬಳ್ಳಿ